# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 520
2. ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 24.09.2020
4. ಉತ್ತರಿಸುವ ಸಚಿವರು : ಜಲಸಂಪನ್ಮೂಲ ಸಚಿವರು

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದ ಪ್ರಮುಖ ಯೋಜನೆಯಾದ ಎತ್ತಿನಹೊಳೆ ಯೋಜನೆಯ ವಿವರಗಳೇನು; (ಮಾಹಿತಿ ನೀಡುವುದು) | ಕುಡಿಯುವ ನೀರಿನ ತೀವ್ರ ಅಭಾವ ಎದುರಿಸುತ್ತಿರುವ ರಾಜ್ಯದ ಹಾಸನ, ಚಿಕ್ಕಮಗಳೂರು, ತುಮಕೂರು, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಿಗೆ ರಾಜ್ಯದ ಪಶ್ಚಿಮಾಭಿಮುಖವಾಗಿ ಹರಿಯುವ ಹಳ್ಳಗಳಿಂದ 24.01 ಟಿ.ಎಂ.ಸಿ ನೀರನ್ನು ಬಳಸಿಕೊಂಡು ಸುರಕ್ಷಿತ ಕುಡಿಯುವ ನೀರು ಒದಗಿಸುವ ಹಾಗೂ ಅಂತರ್ಜಲ ಮರು ಪೂರಣಕ್ಕಾಗಿ ಆ ಭಾಗಗಳಲ್ಲಿನ ಸುಮಾರು 527 ಸಣ್ಣ ನೀರಾವರಿ ಕೆರೆಗಳಿಗೆ ಅವುಗಳ ಸಾಮರ್ಥ್ಯದ ಶೇ 50% ರಷ್ಟು ನೀರು ತುಂಬಿಸುವ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ರೂ.12,912.36 ಕೋಟಿ ಮೊತ್ತದ ಪರಿಷ್ಕೃತ ಯೋಜನಾ ವರದಿಗೆ ಸರ್ಕಾರವು ದಿನಾಂಕ:17.2.2014ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. |
| ಆ) | ಈ ಯೋಜನೆಗೆ ಬೇಕಾದ ಎಷ್ಟು ಎಕರೆ ಭೂಮಿಯನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ; | ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗೆ ಒಟ್ಟಾರೆಯಾಗಿ 12856 ಎಕರೆ 02 ಗುಂಟೆ ಜಮೀನಿನ ಅವಶ್ಯಕತೆಯಿದ್ದು, ಇದುವರೆಗೂ ನೇರ ಖರೀದಿಯಡಿ 374 ಎಕರೆ 32.08 ಗುಂಟೆ ಮತ್ತು 2013ರ ಭೂಸ್ವಾಧೀನ ಕಾಯ್ದೆಯನ್ವಯ ಭೂಸ್ವಾಧೀನ ಪ್ರಕ್ರಿಯೆ ಮೂಲಕ 1073 ಎಕರೆ 25.04 ಗುಂಟೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ. |
| ಇ) | ಈ ಕಾಮಗಾರಿಯನ್ನು ಕೈಗೆತ್ತಿಕೊಂಡ ಸಂಸ್ಥೆ ಯಾವುದು; | ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು ವಿಶ್ವೇಶ್ವರಯ್ಯ ಜಲ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಕಾಮಗಾರಿಯು ಬೃಹತ್ ಸ್ವರೂಪದ್ದಾಗಿರುವುದರಿಂದ ಏತ ಹಾಗೂ ಗುರುತ್ವ ಕಾಲುವೆಯ ಕಾಮಗಾರಿಗಳನ್ನು ಹಂತಹಂತವಾಗಿ ಟೆಂಡರ್ ಆಹ್ವಾನಿಸಿ ವಿವಿಧ ಗುತ್ತಿಗೆದಾರರು/ಗುತ್ತಿಗೆದಾರರ ಸಂಸ್ಥೆಗಳಿಂದ ಕೈಗೊಳ್ಳಲಾಗುತ್ತಿದೆ. |
| ಈ) | ಈ ಯೋಜನೆಯು ಪೂರ್ಣಗೊಳ್ಳುವುದು ಯಾವಾಗ; ಇದಕ್ಕೆ ಮೀಸಲಿಟ್ಟ ಅನುದಾನ ಎಷ್ಟು? | ಈ ಯೋಜನೆಯನ್ನು 2023-24ನೇ ಸಾಲಿನಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ಈ ಯೋಜನೆಯ ಕಾಮಗಾರಿಗಾಗಿ ರೂ.706.06 ಕೋಟಿಗಳ ಅನುದಾನ ಮೀಸಲಿಡಲಾಗಿದೆ. |

**ಸಂಖ್ಯೆ: ಜಸಂಇ 88 ಡಬ್ಲ್ಯೂಎಲ್ಎ 2020**

(ರಮೇಶ್ ಲ. ಜಾರಕಿಹೊಳಿ)
ಜಲಸಂಪನ್ಮೂಲ ಸಚಿವರು
(ಬೃಹತ್ ಮತ್ತು ಮಧ್ಯಮ ನೀರಾವರಿ)